ಕ್ರ.ಸಂ. 38, 149th ಅಧಿವೇಶನ

# ಕರ್ನಾಟಕ ವಿಧಾನ ಪರಿಷತ್ತು
## ಶೂನ್ಯ ವೇಳೆ

ಶ್ರೀ ಯು.ಬಿ.ವೆಂಕಟೇಶ್, ಮಾನ್ಯ ವಿಧಾನ ಪರಿಷತ್ ಸದಸ್ಯರು ಇವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯವಾದ ದಿನಾಂಕ: 20.02.2023ರ ವಿಜಯವಾಣಿ ಪತ್ರಿಕೆಯಲ್ಲಿ 4ಕ್ಕೆ ಮುನ್ನ ಫ್ರೀ ಬಳಿಕ ಭರ್ತಿ ಫೀ ನಿಮ್ಹಾನ್ಸ್ ನಲ್ಲಿ ತಪ್ಪದ ಪರದಾಟ, ಬಿಪಿಎಲ್ ಕಾರ್ಡ್ ಇದ್ದರೂ ಪ್ರಯೋಜನವಿಲ್ಲ ಎಂದು ವರದಿಯಾಗಿರುವ ಬಗ್ಗೆ.

ಜನಸಾಮಾನ್ಯರಿಗೆ ಉತ್ತಮ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಏನೆಲ್ಲ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದರು ಅಪಘಾತ ಹಾಗೂ ತುರ್ತು ಪರಿಸ್ಥಿತಿಯಲ್ಲಿ ರೋಗಿಗಳು ಚಿಕಿತ್ಸೆ ಪಡೆಯಲು ಪರದಾಡುವುದು ತಪ್ಪಿಲ್ಲ. ಆಯುಷ್ಮಾನ್ ಭಾರತ -ಆರೋಗ್ಯ ಕರ್ನಾಟಕ ಯೋಜನೆಯಡಿ ಸರ್ಕಾರಿ ಆಸ್ಪತ್ರೆಗಳಲ್ಲಿ ಬಡರೋಗಿಗಳಿಗೂ ಚಿಕಿತ್ಸೆ ಗಗನ ಕುಸುಮವಾಗಿದ್ದು, ಇವರು ಹಣ ಪಾವತಿಸಿಯೇ ಚಿಕಿತ್ಸೆ ಪಡೆಯಬೇಕು ಎಂಬುವುದಕ್ಕೆ ಬೆಂಗಳೂರು ನಗರದ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ (ನಿಮ್ಹಾನ್ಸ್) ಯಲ್ಲಿ ನಡೆದಿರುವ ಘಟನೆ ತಾಜಾ ಉದಾಹರಣೆಯಾಗಿದೆ.

ಇತ್ತೀಚಿಗೆ ಹಾಸನ ಜಿಲ್ಲೆಯ ಹೊಳೆನರಸೀಪುರದ ದೊಡ್ಡ ಕಾಡನೂರು ಬಳಿ ಅಪಘಾತದಲಿ ಗಾಯಗೊಂಡಿದ್ದ 72 ವರ್ಷದ ಚಂದ್ರಪ್ಪನನ್ನು ಹಾಸನ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ದಾಖಲಿಸಿ, ಹೆಚ್ಚಿನ ಚಿಕಿತ್ಸೆಯ ಅನಿವಾರ್ಯತೆಯಿಂದ ಸಂಜೆ 4.30ರ ಸುಮಾರಿಗೆ ನಿಮ್ಹಾನ್ಸ್ ಗೆ ಕರೆತರಲಾಗಿದೆ. ವೈದ್ಯರಿಂದ ರೋಗಿಗೆ ಚಿಕಿತ್ಸೆ ದೊರೆತರೂ ಕೂಡ ಹಣ ಪಾವತಿಸಿ ಚಿಕಿತ್ಸೆಯನ್ನು ಪಡೆಯಬೇಕಾದದ್ದು ಮಾತ್ರ ವಿಪರ್ಯಾಸದ ಸಂಗತಿಯಾಗಿದೆ.

ಸರ್ಕಾರಿ ಆಸ್ಪತ್ರೆಯಿಂದ ರೆಫರ್ ಆಗಿ ನಿಮ್ಹಾನ್ಸ್ ಗೆ ಹೆಚ್ಚಿನ ಚಿಕಿತ್ಸೆಗೆ ಬಂದು ಬಿಪಿಎಲ್ ಕಾರ್ಡ್ ತೋರಿಸಿದರೂ ಸಂಜೆ 4.00 ಗಂಟೆಗೆ ಕಛೇರಿ ಮುಚ್ಚುವುದರಿಂದ ಹಣ ಪಾವತಿಸಲೇಬೇಕೆಂದು ಆಸ್ಪತ್ರೆಯ ಮೂಲಗಳಿಂದ ತಿಳಿದುಬಂದಿದೆ. ರೋಗಿಗೆ ಚಿಕಿತ್ಸೆ ನೀಡಿದ ವೈದ್ಯರು ಕೆಲ ದಿನ ಆಸ್ಪತ್ರೆಯಲ್ಲಿ ಇರಬೇಕೆಂದರೂ ಹಾಸಿಗೆಗಳ ಕೊರತೆಯಿದ್ದು, ಪ್ರತಿದಿನ ಹಾಸನದಿಂದ ಬೆಂಗಳೂರಿಗೆ ಬೆಂಗಳೂರಿನಿಂದ ಹಾಸನಕ್ಕೆ ಹೋಗಿ ಬರಲು ಆಂಬುಲೆನ್ಸ್ ಗೆ ಹಣ ಪಾವತಿಸುತ್ತಿರುವುದಾಗಿ ವರದಿಯಾಗಿದೆ.

ಆಯುಷ್ಮಾನ್ ಭಾರತ - ಆರೋಗ್ಯ ಕರ್ನಾಟಕ ಯೋಜನೆಯಡಿ ಬಿಪಿಎಲ್ ಕುಟುಂಬ ವರ್ಗದ ರೋಗಿಗಳಿಗೆ ಸರ್ಕಾರಿ ಆಸ್ಪತ್ರೆಗಳು 24/7 ಉಚಿತ ಚಿಕಿತ್ಸೆಯನ್ನು ನೀಡಬೇಕಾಗಿದ್ದು, ಇದಕ್ಕೆ ತದ್ವಿರುದ್ಧವಾಗಿ ನಿಮ್ಹಾನ್ಸ್ ನಲ್ಲಿ ವ್ಯವಸ್ಥೆಗಳಿರುವುದು ನಿಜಕ್ಕೂ ವ್ಯವಸ್ಥೆಗೆ ಹಿಡಿದ ಕೈಗನ್ನಡಿಯಾಗಿದೆ.

ಆದುದರಿಂದ, ಸರ್ಕಾರ ಕೂಡಲೇ ಬಿಪಿಎಲ್ ಕಾರ್ಡ್ ಹೊಂದಿರುವ ರೋಗಿಗಳಿಗೆ ಆಸ್ಪತ್ರೆಗಳು ಯಾವುದೇ ಸಬೂಬು ಹೇಳದೆ 24/7 ಚಿಕಿತ್ಸೆಯನ್ನು ನೀಡುವಂತೆ ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನವನ್ನು ನೀಡುವ ಬಗ್ಗೆ:-

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರ ಹೇಳಿಕೆ:

ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯಡಿ ಸರ್ಕಾರಿ ಹಾಗೂ ಖಾಸಗಿ ಅಸ್ಪತ್ರೆಗಳು ಒಡಂಬಡಿಕೆ ಮಾಡಿಕೊಂಡಿದ್ದು ಬಿ.ಪಿ.ಎಲ್‌ಕಾರ್ಡುದಾರರಿಗೆ ಉಚಿತ ಚಿಕಿತ್ಸೆಯನ್ನು ನೀಡುವುದಾಗಿರುತ್ತದೆ. ಸದರಿ ವೆಚ್ಚವನ್ನು ಸರ್ಕಾರ ನಿಗದಿಪಡಿಸಿದ ದರಗಳಲ್ಲಿ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನಿಂದ ಭರಿಸಲಾಗುವುದು. ರೋಗಿಯು ಮೊದಲಿಗೆ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ, ಅಲ್ಲಿ ಚಿಕಿತ್ಸೆಯ ವಿಧಾನಗಳು ಲಭ್ಯವಿಲ್ಲದಿದ್ದ ಸಂದರ್ಭದಲ್ಲಿ ಉನ್ನತ ದರ್ಜೆಯ ಸರ್ಕಾರಿ ಆಸ್ಪತ್ರೆ ಅಥವಾ ನೋಂದಾಯಿತ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ಶಿಫಾರಸ್ಸು (ರೆಫರಲ್) ಮಾಡಲಾಗುತ್ತದೆ. ರೋಗಿಗಳಿಗೆ ಯಾವುದೇ ತೊಂದರೆಯಾದಲ್ಲಿ ಸಹಾಯವಾಣಿ ಸಂಖ್ಯೆ 1800-425-8330 ಗೆ ಕರೆಮಾಡಿ ಪರಿಹಾರ ಪಡೆಯಬಹುದಾಗಿದೆ. ನೊಂದಾಯಿತ ಅಸ್ಪತ್ರೆಗಳಲ್ಲಿ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನಿಂದ ನೇಮಕಗೊಂಡ ಆರೋಗ್ಯ ಮಿತ್ರರು ಕರ್ತವ್ಯ ನಿರ್ವಹಿಸುತ್ತಿದ್ದು ರೋಗಿಗಳಿಗೆ ತೊಂದರೆಯಾಗದಂತೆ ಸಹಾಯಕ್ಕಾಗಿ ನೇಮಿಸಲಾಗಿರುತ್ತದೆ.

ಆಯುಷ್ಮಾನ್ ಭಾರತ್- ಆರೋಗ್ಯ ಕರ್ನಾಟಕ ಯೋಜನೆಯಡಿ ನಿಮ್ಹಾನ್ಸ್ ಆಸ್ಪತ್ರೆಯು ಯೋಜನೆ ಪ್ರಾರಂಭದಿಂದ (31/10/2018) ನೊಂದಾವಣೆಯಾಗಿರುತ್ತದೆ. ಯೋಜನೆಯಡಿ ಅಸ್ಪತ್ರೆಯು ಇಲ್ಲಿಯವರೆಗೆ 13003 ರೋಗಿಗಳಿಗೆ ಚಿಕಿತ್ಸೆ ನೀಡಿರುತ್ತಾರೆ.

ನಿಮ್ಹಾನ್ಸ್ ಆಸ್ಪತ್ರೆಯವರು ಆಯುಷ್ಮಾನ್ ಭಾರತ್- ಆರೋಗ್ಯ ಕರ್ನಾಟಕ ಯೋಜನೆಯಡಿ ದಾಖಲಾಗುವ ರೋಗಿಗಳಿಂದ ಹೆಚ್ಚುವರಿ ಪಾವತಿ ಮಾಡಿಕೊಳ್ಳುತ್ತಿರುವ ಬಗ್ಗೆ ಪ್ರಕರಣಗಳು ದಾಖಲಾಗಿರುತ್ತವೆ. ಎಲ್ಲಾ ದೂರುಗಳಿಗೆ ಸಂಬಂಧಿಸಿದಂತೆ ಆಸ್ಪತ್ರೆಗೆ ನೋಟಿಸ್ ನೀಡಿ ಕ್ರಮಕೈಗೊಳ್ಳಲಾಗುತ್ತಿದೆ. ಇದುವರೆಗೆ ದಾಖಲಾದ ಪ್ರಕರಣಗಳಲ್ಲಿ ಈ ಕೆಳಗಿನಂತೆ ಕ್ರಮಕೈಗೊಳ್ಳಲಾಗಿದೆ;

1. ಎರಡು ಪ್ರಕರಣಗಳಲ್ಲಿ ಜಿಲ್ಲಾ ಕುಂದುಕೊರತೆ ಪರಿಹಾರ ಸಮಿತಿಯ ಸಭೆಯ ನಡವಳಿಯಂತೆ ಆಸ್ಪತ್ರೆಗೆ ರೋಗಿಯಿಂದ ಪಡೆದ ಎರಡರಷ್ಟು ಹಣವನ್ನು ದಂಡ ವಿಧಿಸಿದ್ದು ಆಸ್ಪತ್ರೆಯ ಕ್ಲೇಮ್ಸ್ ಹಣದಿಂದ ಕಡಿತಗೊಳಿಸಿ ರೋಗಿಗಳಿಗೆ ಹಣ ಮರುಪಾವತಿಸಲಾಗಿರುತ್ತದೆ.

2. ಒಂದು ಪ್ರಕರಣದಲ್ಲಿ ಆಸ್ಪತ್ರೆಗೆ ನೋಟಿಸ್ ನೀಡಿದ್ದು ಸದರಿ ಪ್ರಕರಣವನ್ನು ರಾಜ್ಯ ಕುಂದುಕೊರತೆ ಪರಿಹಾರ ಸಮಿತಿ ಸಭೆಯಲ್ಲಿ ಮಂಡಿಸಿ, ಸಭೆಯ ನಿರ್ಣಯದಂತೆ ಮುಂದಿನ ಕ್ರಮಕೈಗೊಳ್ಳಲಾಗುವುದು.

3. ಹಾಸನ ಜಿಲ್ಲೆಯ ಹೊಳೆನರಸೀಪುರದ ಕಾಡುನೂರ ಬಳಿ ಅಪಘಾತಗೊಂಡ ರೋಗಿ ಚಂದ್ರಪ್ಪ, ಹಾಸನ ಇವರ ಪ್ರಕರಣಕ್ಕೆ ಸಂಬಂಧಿಸಿದಂತೆ ನಿಮ್ಹಾನ್ಸ್ ಆಸ್ಪತ್ರೆಗೆ ಕೂಡಲೇ ನೋಟೀಸ್ ಜಾರಿಗೊಳಿಸಿ ವಿವರಣೆ ಪಡೆದು ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಈಗಾಗಲೇ ಎಲ್ಲಾ ನೊಂದಾಯಿತ ಅಸ್ಪತ್ರೆಗಳಿಗೆ ಬಿಪಿಎಲ್ ಕಾರ್ಡು ಹೊಂದಿರುವ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡುವಂತೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದ್ದು, ತಪ್ಪಿದ್ದಲ್ಲಿ ದಂಡ ವಿಧಿಸುವುದು ಮತ್ತು ನೊಂದಾವಣೆಯನ್ನು ರದ್ದುಪಡಿಸುವ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆ.

**ಆಕುಕ 39 ಎಸ್‌ಬಿವಿ 2023**

**(ಡಾ. ಕೆ ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು